ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ/ಶೈವಿ/184/ಕ.ಲೋ.ಆ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560001.
ದಿನಾಂಕ : 26.04.2023.

# ಸುತ್ತೋಲೆ

ವಿಷಯ: ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ : 29.04.2023 ಮತ್ತು 30.04.2023 ರಂದು ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುವ ಬಗ್ಗೆ.

ಉಲ್ಲೇಖ: ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ ಇವರ ಅ.ಸ ಪತ್ರಸಂಖ್ಯೆ : ಪಿಎಸ್‌ಸಿ 911/ಆರ್‌ಟಿಬಿ-2/2022-23/463, ದಿನಾಂಕ : 17.04.2023.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯದಲ್ಲಿನ ಗಣತಿದಾರರು ಕಂ ಡಾಟಾ ಎಂಟ್ರಿ ಆಪರೇಟರ್ ಮತ್ತು ಜಲ ಸಂಪನ್ಮೂಲ ಇಲಾಖೆಯಲ್ಲಿನ ಕಿರಿಯ ಇಂಜಿನಿಯರ್ (ಸಿವಿಲ್) ಹಾಗೂ ಕಿರಿಯ ಇಂಜಿನಿಯರ್ (ಮೆಕಾನಿಕಲ್) ಹುದ್ದೆಗಳಿಗೆ ದಿನಾಂಕ : 29.04.2023 ಮತ್ತು 30.04.2023 ರಂದು ಕನ್ನಡ ಭಾಷಾ ಪರೀಕ್ಷೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬೆಂಗಳೂರು, ಕಲಬುರಗಿ, ಬಳ್ಳಾರಿ, ರಾಯಚೂರು, ಕೊಪ್ಪಳ ಮತ್ತು ಯಾದಗಿರಿ ವಿಭಾಗೀಯ ಜಿಲ್ಲಾ ಕೇಂದ್ರಗಳಲ್ಲಿ ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ವಿವಿಧ ಸರ್ಕಾರಿ ಕಾಲೇಜುಗಳಲ್ಲಿ ನಡೆಸಲು ತೀರ್ಮಾನಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಸದರಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಪ್ರಾಂಶುಪಾಲರುಗಳು ಸದರಿ ದಿನಾಂಕಗಳಂದು ಕಾಲೇಜುಗಳಲ್ಲಿರುವ ಅವಶ್ಯಕ ಕಟ್ಟಡ/ಕೊಠಡಿಗಳನ್ನು ಹಾಗೂ ಇತರೆ ಮೂಲಭೂತ ಸೌಕರ್ಯಗಳನ್ನು ನೀಡಿ ಸಹಕರಿಸುವಂತೆ ಹಾಗೂ ಉಪನ್ಯಾಸಕರು/ಸಿಬ್ಬಂಧಿಗಳು ಮೇಲ್ಕಂಡ ದಿನಾಂಕಗಳಂದು ನಿಯೋಜಿಸುವ ಪರೀಕ್ಷಾ ಕಾರ್ಯಗಳನ್ನು ಕಡ್ಡಾಯವಾಗಿ ನಿರ್ವಹಿಸುವಂತೆ ಸೂಚಿಸಲಾಗಿದೆ.

ಲಗತ್ತು : ಕಾಲೇಜುಗಳ ಪಟ್ಟಿ

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಕಲಬುರಗಿ-ಇವರಿಗೆ ಅಗತ್ಯ ಕ್ರಮವಹಿಸಲು.
2. ಸಂಬಂಧಿಸಿದ ಕಾಲೇಜುಗಳ ಪ್ರಾಂಶುಪಾಲರುಗಳಿಗೆ -ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು- ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ತಿಳಿಸಲಾಗಿದೆ.

ಪ್ರತಿಯನ್ನು:

1. ಕಾರ್ಯದರ್ಶಿಗಳು, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು – 560001.